All India Radio: Bangalore
National Bulletin In Kannada
24.03.2026  13.10 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
24.03.2026  13.10 hrs

<>><><*><><<>

ಮುಖ್ಯಾಂಶಗಳು

- ಪಶ್ಚಿಮ ಏಷ್ಯಾ ಸಂಘರ್ಷ ; ರಾಜ್ಯಸಭೆಯಲ್ಲಿಂದು ಭಾರತದ ನಿಲುವಿನ ಕುರಿತು ಪ್ರಧಾನಿ ನರೇಂದ್ರ ಮೋದಿ ಭಾಷಣ
- ಹಿಂದೂ, ಸಿಖ್ ಮತ್ತು ಬೌದ್ಧ ಧರ್ಮಕ್ಕೆ ಸೇರಿದ ವ್ಯಕ್ತಿಗಳು ಮಾತ್ರ ಪರಿಶಿಷ್ಟ ಜಾತಿ ಸ್ಥಾನಮಾನ ಪಡೆಯಲು ಅರ್ಹರು - ಸುಪ್ರೀಂಕೋರ್ಟ್ ಮಹತ್ವದ ತೀರ್ಪು
- ಕಳೆದ ೫ ವರ್ಷಗಳಲ್ಲಿ ಸಹಕಾರ ವಲಯಕ್ಕೆ ೫ ಲಕ್ಷ ಕೋಟಿ ರೂಪಾಯಿ ಬಿಡುಗಡೆ ; ಲೋಕಸಭೆಗೆ ಸಹಕಾರ ಖಾತೆ ರಾಜ್ಯ ಸಚಿವರ ಮಾಹಿತಿ
- ಕೇಂದ್ರ ಸರ್ಕಾರದ ಪ್ರಯತ್ನಗಳಿಂದಾಗಿ ರೈತರ ಆದಾಯದಲ್ಲಿ ಗಣನೀಯ ಏರಿಕೆ ; ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್
- ಇಂದು ವಿಶ್ವ ಕ್ಷಯರೋಗ ದಿನ ; ಕ್ಷಯ ಮುಕ್ತ ಭಾರತ ನಿರ್ಮಾಣಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ

<>><><*><><<>

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಸಂಘರ್ಷದ ಕುರಿತು ಭಾರತದ ನಿಲುವನ್ನು ಸ್ಪಷ್ಟಪಡಿಸಲು ಪ್ರಧಾನಿ ನರೇಂದ್ರ ಮೋದಿ ರಾಜ್ಯಸಭೆಯನ್ನು ಉದ್ದೇಶಿಸಿ ಇಂದು ಮಾತನಾಡಲಿದ್ದಾರೆ. ನಿನ್ನೆ ಪ್ರಧಾನಿ ಲೋಕಸಭೆಯಲ್ಲಿ ಈ ವಿಷಯದ ಕುರಿತು ಮಾತನಾಡಿದ್ದು, ಸಂಘರ್ಷ ಪೀಡಿತ ಪ್ರದೇಶಗಳಲ್ಲಿರುವ ಭಾರತೀಯ ನಾಗರಿಕರ ಸುರಕ್ಷತೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ವಿವರಿಸಿದ್ದಾರೆ. ಪ್ರಾದೇಶಿಕ ಸ್ಥಿರತೆ ಮತ್ತು ಜಾಗತಿಕ ವ್ಯಾಪಾರ ಮಾರ್ಗಗಳ ಮೇಲೆ ಈ ಬಿಕ್ಕಟ್ಟು ಬೀರುತ್ತಿರುವ ಪರಿಣಾಮಗಳ ಕುರಿತು ಅವರು ಸದನದ ಗಮನ ಸೆಳೆದಿದ್ದರು. ಮಾನವೀಯತೆ ದೃಷ್ಟಿಯಿಂದ ಭಾರತ ಯಾವಾಗಲೂ ಶಾಂತಿಯ ಪರವಾಗಿದ್ದು, ಸಂವಾದ ಮತ್ತು ರಾಜತಾಂತ್ರಿಕತೆ ಮಾತ್ರವೇ ಈ ಸಮಸ್ಯೆಗೆ ಏಕೈಕ ಪರಿಹಾರ ಎಂದು ಪ್ರಧಾನಿ ಪ್ರತಿಪಾದಿಸಿದ್ದರು.

<>><><*><><<>

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಸಂಘರ್ಷದ ಕುರಿತು ಭಾರತದ ನಿಲುವನ್ನು ಸ್ಪಷ್ಟಪಡಿಸಲು ಪ್ರಧಾನಿ ನರೇಂದ್ರ ಮೋದಿ ರಾಜ್ಯಸಭೆಯನ್ನು ಉದ್ದೇಶಿಸಿ ಇಂದು ಮಾತನಾಡಲಿದ್ದಾರೆ. ನಿನ್ನೆ

ಪ್ರಧಾನಿ ಲೋಕಸಭೆಯಲ್ಲಿ ಈ ವಿಷಯದ ಕುರಿತು ಮಾತನಾಡಿದ್ದು, ಸಂಘರ್ಷ ಪೀಡಿತ ಪ್ರದೇಶಗಳಲ್ಲಿರುವ ಭಾರತೀಯ ನಾಗರಿಕರ ಸುರಕ್ಷತೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ವಿವರಿಸಿದ್ದಾರೆ. ಪ್ರಾದೇಶಿಕ ಸ್ಥಿರತೆ ಮತ್ತು ಜಾಗತಿಕ ವ್ಯಾಪಾರ ಮಾರ್ಗಗಳ ಮೇಲೆ ಈ ಬಿಕ್ಕಟ್ಟು ಬೀರುತ್ತಿರುವ ಪರಿಣಾಮಗಳ ಕುರಿತು ಅವರು ಸದನದ ಗಮನ ಸೆಳೆದಿದ್ದರು. ಮಾನವೀಯತೆ ದೃಷ್ಟಿಯಿಂದ ಭಾರತ ಯಾವಾಗಲೂ ಶಾಂತಿಯ ಪರವಾಗಿದ್ದು, ಸಂವಾದ ಮತ್ತು ರಾಜತಾಂತ್ರಿಕತೆ ಮಾತ್ರವೇ ಈ ಸಮಸ್ಯೆಗೆ ಏಕೈಕ ಪರಿಹಾರ ಎಂದು ಪ್ರಧಾನಿ ಪ್ರತಿಪಾದಿಸಿದ್ದರು.

<>><><*><><<>

ಕಳೆದ ೫ ವರ್ಷಗಳಲ್ಲಿ ದೇಶಾದ್ಯಂತ ಸಹಕಾರಿ ವಲಯವನ್ನು ಬಲಪಡಿಸಲು ಕೇಂದ್ರ ಸರ್ಕಾರ ೫ ಲಕ್ಷ ಕೋಟಿ ರೂಪಾಯಿಗಳನ್ನು ವಿತರಿಸಿದೆ ಎಂದು ಕೇಂದ್ರ ಸಹಕಾರ ಖಾತೆ ರಾಜ್ಯ ಸಚಿವ ಕೃಷ್ಣಪಾಲ್ ಗುರ್ಜರ್ ತಿಳಿಸಿದ್ದಾರೆ. ಲೋಕಸಭೆಯಲ್ಲಿ ಪ್ರಶ್ನೋತ್ತರ ಕಲಾಪದ ವೇಳೆ ಈ ಕುರಿತು ಮಾಹಿತಿ ನೀಡಿದ ಅವರು, ೧೯೬೩ರಿಂದ ೨೦೧೪ರವರೆಗಿನ ೫೧ ವರ್ಷಗಳ ಅವಧಿಯಲ್ಲಿ ರಾಷ್ಟ್ರೀಯ ಸಹಕಾರಿ ಅಭಿವೃದ್ಧಿ ನಿಗಮ ಕೇವಲ ೫೦ ಸಾವಿರ ಕೋಟಿ ರೂಪಾಯಿಗಳನ್ನು ಮಾತ್ರ ವಿನಿಯೋಗಿಸಿತ್ತು ಎಂದು ಅಂಕಿಅಂಶಗಳನ್ನು ಉಲ್ಲೇಖಿಸಿದರು. ಕೇಂದ್ರ ಸರ್ಕಾರಕ್ಕೆ ರೈತರ ಕಲ್ಯಾಣವೇ ಪ್ರಮುಖ ಆದ್ಯತೆಯಾಗಿದ್ದು, ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಸದೃಢಗೊಳಿಸಲು ಸರ್ಕಾರ ಮೊದಲ ಬಾರಿಗೆ ೧೦ ಸಾವಿರ ಕೋಟಿ ರೂಪಾಯಿಗಳ ವಿಶೇಷ ಯೋಜನೆಯನ್ನು ಜಾರಿಗೆ ತಂದಿದೆ ಎಂದರು.

<>><><*><><<>

ಕೇಂದ್ರ ಸರ್ಕಾರದ ನಿರಂತರ ಪ್ರಯತ್ನಗಳ ಫಲವಾಗಿ ದೇಶದ ರೈತರ ಆದಾಯದಲ್ಲಿ ಗಮನಾರ್ಹ ಏರಿಕೆಯಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಲೋಕಸಭೆಯ ಪ್ರಶ್ನೋತ್ತರ ಅವಧಿಯಲ್ಲಿಂದು ಪೂರಕಪ್ರಶ್ನೆಗಳಿಗೆ ಉತ್ತರಿಸಿದ ಅವರು, ರೈತರ ಆದಾಯವು ಕೇವಲ ಎರಡರಷ್ಟು ಮಾತ್ರವಲ್ಲದೆ, ಕೆಲ ರೈತರಲ್ಲಿ ಮೂರು ಪಟ್ಟು ಮತ್ತು ಎಂಟು ಪಟ್ಟುಗಳವರೆಗೆ ಹೆಚ್ಚಳವಾಗಿದೆ ಎಂದು ವಿವರಿಸಿದರು. ೨೦೧೪ರಲ್ಲಿ ಕೇವಲ ೧೯ ಸಾವಿರದ ೩೦೬ ಕೋಟಿ ರೂಪಾಯಿಗಳಷ್ಟಿದ್ದ ಕೃಷಿ ಆಯವ್ಯಯವನ್ನು ಪ್ರಸ್ತುತ ೧.೩೦ ಲಕ್ಷ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಏರಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.  ದೇಶದ ಆಹಾರ ಧಾನ್ಯ ಉತ್ಪಾದನೆಯು ೨೦೧೪ರಿಂದ ಈವರೆಗೆ ಶೇಕಡಾ ೪೪ ರಷ್ಟು ಏರಿಕೆಯಾಗಿದೆ. ಇದಲ್ಲದೆ, ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ದೇಶದ ರೈತರಿಗೆ ವಾರ್ಷಿಕ ೬ ಸಾವಿರ ರೂಪಾಯಿಗಳ ಆರ್ಥಿಕ ನೆರವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲಾಗುತ್ತಿದೆ. ರೈತರ ಕಲ್ಯಾಣಕ್ಕಾಗಿ ಸರ್ಕಾರವು ಕೈಗೊಂಡಿರುವ ಕ್ರಾಂತಿಕಾರಕ

ಕ್ರಮಗಳಿಂದಾಗಿ ಕೃಷಿ ಕ್ಷೇತ್ರವು ಇಂದು ಹೊಸ ಆಯಾಮವನ್ನು ಪಡೆದಿದೆ ಎಂದು ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದರು.

<>><><*><><<>

ಇಂದು ವಿಶ್ವ ಕ್ಷಯರೋಗ ದಿನ. ಕ್ಷಯರೋಗದ ಗಂಭೀರ ಆರೋಗ್ಯ ಸಾಮಾಜಿಕ ಮತ್ತು ಆರ್ಥಿಕ ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಹಾಗೂ ಅದನ್ನು ಕೊನೆಗಾಣಿಸುವ ಪ್ರಯತ್ನಗಳನ್ನು ಚುರುಕುಗೊಳಿಸಲು ಪ್ರತಿವರ್ಷ ಮಾರ್ಚ್ ೨೪ರಂದು ವಿಶ್ವ ಕ್ಷಯರೋಗ ದಿನವನ್ನು ಆಚರಿಸಲಾಗುತ್ತದೆ. ೧೮೮೨ ರಲ್ಲಿ ಡಾ.ರಾಬರ್ಟ್ ಕೋಚ್ ಅವರು ಕ್ಷಯರೋಗಕ್ಕೆ ಕಾರಣವಾಗುವ ಬ್ಯಾಕ್ಟೀರಿಯಾವನ್ನು ಪತ್ತೆ ಹಚ್ಚಿದ ದಿನದ ನೆನಪಿಗಾಗಿ ಈ ದಿನವನ್ನು ಗುರುತಿಸಲಾಗಿದೆ. 'ಹೌದು! ನಾವು ಕ್ಷಯರೋಗವನ್ನು ಕೊನೆಗಾಣಿಸಬಲ್ಲೆವು' ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ. ಈ ಸಂದರ್ಭದಲ್ಲಿ ಸಂದೇಶ ನೀಡಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಕ್ಷಯರೋಗ ಇಂದಿಗೂ ಜಾಗತಿಕ ಸಾರ್ವಜನಿಕ ಆರೋಗ್ಯಕ್ಕೆ ದೊಡ್ಡ ಸವಾಲಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಭಾರತದಲ್ಲಿ ಜಾರಿಯಲ್ಲಿರುವ ಕ್ಷಯಮುಕ್ತ ಭಾರತ ಅಭಿಯಾನದ ಮೂಲಕ ಆರಂಭಿಕ ಹಂತದ ರೋಗ ನಿರ್ಣಯ, ಉಚಿತ ಚಿಕಿತ್ಸೆ, ಪೌಷ್ಠಿಕಾಂಶದ ಬೆಂಬಲ ಮತ್ತು ರೋಗಿಗಳ ಆರೈಕೆಯಲ್ಲಿ ಗಮನಾರ್ಹ ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದ್ದಾರೆ. ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮದ ಯಶಸ್ಸು ಸಾಮೂಹಿಕ ಸಂಕಲ್ಪದ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ ಎಂದಿದ್ದಾರೆ. ಔಷಧ ನಿರೋಧಕ ಕ್ಷಯರೋಗದ ಬೆಳೆಯುತ್ತಿರುವ ಆತಂಕವನ್ನು ಎದುರಿಸಲು ಸ್ಥಳೀಯ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಚ್ಚಿನ ಬದ್ಧತೆ ಅಗತ್ಯವಿದ್ದು, ಕ್ಷಯರೋಗ ನಿರ್ಮೂಲನೆಗಾಗಿ ಎಲ್ಲ ಪಾಲುದಾರರು ಕೈಜೋಡಿಸಬೇಕು ಎಂದು ರಾಷ್ಟ್ರಪತಿ ಕರೆ ನೀಡಿದರು.

<>><><*><><<>

ಅಸ್ಸಾಂ ರೈಫಲ್ಸ್ ಪಡೆಯ ಸಂಸ್ಥಾಪನಾ ದಿನವಾದ ಇಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಎಲ್ಲಾ ಶ್ರೇಣಿಯ ಸೇನಾ ಸಿಬ್ಬಂದಿಗೆ ಶುಭಾಶಯ ಕೋರಿದ್ದಾರೆ. ಗಡಿ ಪ್ರದೇಶಗಳನ್ನು ರಕ್ಷಿಸುವ ಮೂಲಕ ದೇಶದ ಭದ್ರತಾ ವ್ಯವಸ್ಥೆಯಲ್ಲಿ ಅಸ್ಸಾಂ ರೈಫಲ್ಸ್ ಪಡೆ ಪ್ರಮುಖ ಪಾತ್ರ ವಹಿಸಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<>><><*><><<>

ಶ್ರವಣ ಮತ್ತು ವಾಕ್ ದೋಷವುಳ್ಳ ವಿಶೇಷಚೇತನರಿಗೆ ಜೀವ ವಿಮೆ ಸೌಲಭ್ಯಗಳನ್ನು ನಿರಾಕರಿಸಲಾಗುತ್ತಿದೆ ಎಂಬ ದೂರಿನ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಎನ್‌ಎಚ್‌ಆರ್‌ಸಿ ಗಂಭೀರ ಕ್ರಮಕ್ಕೆ ಮುಂದಾಗಿದೆ. ವಿಮಾ ಕಂಪನಿಗಳು ಇಂತಹ ವ್ಯಕ್ತಿಗಳಿಗೆ

ರಕ್ಷಣೆ ನೀಡಲು ನಿರಾಕರಿಸುತ್ತಿರುವುದು ತಾರತಮ್ಯದ ನೀತಿಯಾಗಿದೆ ಎಂಬ ದೂರಿನನ್ವಯ, ಆಯೋಗದ ಸದಸ್ಯ ಪ್ರಿಯಾಂಕ್ ಕಾನೂಂಗೊ ಅವರ ನೇತೃತ್ವದ ಪೀಠ ಭಾರತೀಯ ವಿಮಾ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರಕ್ಕೆ ತುರ್ತು ನೋಟಿಸ್ ಜಾರಿ ಮಾಡಿದೆ.

<>><><*><><<>

ದೇಶದ ಮಾರುಕಟ್ಟೆಯಲ್ಲಿ ಇತ್ತೀಚೆಗೆ ಕಂಡುಬರುತ್ತಿರುವ ತೂಕ ಇಳಿಸುವ ಜಿಎಲ್‌ಪಿ-೧ ಆಧಾರಿತ ಔಷಧಗಳ ಅನಧಿಕೃತ ಮಾರಾಟ ಮತ್ತು ಪ್ರಚಾರವನ್ನು ತಡೆಯಲು ಭಾರತೀಯ ಔಷಧ ನಿಯಂತ್ರಕ ಸಂಸ್ಥೆ ಡಿಸಿಜಿಐ ತೀವ್ರ ನಿಗಾ ವಹಿಸುತ್ತಿದೆ. ಚಿಲ್ಲರೆ ಔಷಧಾಲಯಗಳು, ಆನ್‌ಲೈನ್ ವೇದಿಕೆಗಳು ಮತ್ತು ವೆಲ್‌ನೆಸ್ ಕ್ಲಿನಿಕ್‌ಗಳ ಮೂಲಕ ಈ ಔಷಧಗಳ ಜನರಿಕ್ ಮಾದರಿಗಳು ವ್ಯಾಪಕವಾಗಿ ಲಭ್ಯವಾಗುತ್ತಿರುವುದು ಆತಂಕ ಮೂಡಿಸಿದ್ದು, ಈ ಹಿನ್ನೆಲೆಯಲ್ಲಿ ಕೇಂದ್ರ ಆರೋಗ್ಯ ಸಚಿವಾಲಯ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದೆ.

<>><><*><><<>

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಾಮಾನ್ಯ ಜನರ ಏಳಿಗೆಗಾಗಿ ಸಾರ್ವಜನಿಕ ಆಸ್ತಿಗಳ ವಿಕೇಂದ್ರಿಕರಣ ಮತ್ತು ನಗದೀಕರಣದಲ್ಲಿ ಕೇಂದ್ರ ಸರ್ಕಾರ ಅಪಾರ ನಂಬಿಕೆ ಹೊಂದಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಪ್ರಾಯೋಜಿತ ರಾಜಮಾರ್ಗ್ ಇನ್ವಾ ಇನ್ವೆಸ್ಟ್‌ಮೆಂಟ್ ಟ್ರಸ್ಟ್‌ಅನ್ನು ಇಂದು ಕೇಂದ್ರ ಸಚಿವರ ಸಮ್ಮುಖದಲ್ಲಿ ಮುಂಬೈ ಷೇರುಮಾರುಕಟ್ಟೆಯಲ್ಲಿ ಪಟ್ಟಿ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ೨೦೧೪ರಿಂದ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ದೇಶದ ಮೂಲಸೌಕರ್ಯ ವಲಯದಲ್ಲಿ ಕ್ರಾಂತಿಕಾರಿ ಬದಲಾವಣೆಗಳನ್ನು ತರಲಾಗಿದೆ ಎಂದರು.

<>><><*><><<>

ಇರಾನ್‌ನ ಪ್ರಮುಖ ಇಂಧನ ಮತ್ತು ವಿದ್ಯುತ್ ಸ್ಥಾವರಗಳ ಮೇಲೆ ನಡೆಸಲು ಉದೇಶಿಸಿದ್ದ ವೈಮಾನಿಕ ದಾಳಿಗಳನ್ನು ತಾತ್ಕಾಲಿಕವಾಗಿ ಮುಂದೂಡುವಂತೆ ರಕ್ಷಣಾ ಇಲಾಖೆಗೆ ನಿರ್ದೇಶನ ನೀಡಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ವಾಷಿಂಗ್ಟನ್ ಡಿಸಿಯ ಶ್ವೇತ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ೨ ದಿನಗಳಿಂದ ಅಮೆರಿಕ ಮತ್ತು ಇರಾನ್ ನಡುವೆ ನಡೆದ ಪ್ರಾಥಮಿಕ ಮಾತುಕತೆಗಳ ಆಧಾರದ ಮೇಲೆ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಇರಾನ್ ಯಾವುದೇ ಕಾರಣಕ್ಕೂ ಅಣ್ವಸ್ತ್ರಗಳನ್ನು ಹೊಂದದಂತೆ ಅಮೆರಿಕ ಖಚಿತಪಡಿಸಿಕೊಳ್ಳಲಿದೆ ಎಂದು ಅವರು ಪುನರುಚ್ಚರಿಸಿದ್ದಾರೆ. ಈ ನಡುವೆ ಅಮೆರಿಕದ ಈ ಹೇಳಿಕೆಯನ್ನು ಇರಾನ್ ಸರ್ಕಾರ ತಳ್ಳಿ ಹಾಕಿದೆ.

ಅಮೆರಿಕದೊಂದಿಗೆ ಯಾವುದೇ ನೇರ ಮಾತುಕತೆ ನಡೆಯುತ್ತಿಲ್ಲ ಎಂದು ಇರಾನ್ ಸರ್ಕಾರಿ ಮಾಧ್ಯಮ ವರದಿ ಮಾಡಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೨೦ ಕ್ಕೆ ><><<>